# ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ
# ಅಫಜಲಪೂರ

ಸಿಸಿ ನಂ.132/2016

ಚಾಸಾ-7 ಪ್ರಾಸಾ-4

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣಿಕೃತ
ಹೇಳಿಕೆ ಪಡೆದುಕೊಳ್ಳಲಾಯಿತು
ದಿನಾಂಕ: 28.01.2019

| | | |
|---|---|---|
| ಹೆಸರು | ಃ | ಹಣಮಂತ ಮಿರಗಿ |
| ತಂದೆ ಹೆಸರು | ಃ | ನಿಂಗಪ್ಪ |
| ವಯಸ್ಸು | ಃ | 50-ವರ್ಷ |
| ಉದ್ಯೋಗ | ಃ | ಕೂಲಿ |
| ವಾಸಸ್ಥಳ | ಃ | ಕರಜಗಿ, ತಾ. ಅಫಜಲಪೂರ |

ಮುಖ್ಯ ವಿಚಾರಣೆಃ ಎಪಿಪಿ ಯವರಿಂದ

ಆರೋಪಿತರ ಹಾಗೂ ಚಾಸಾ-1 ರವರ ಪರಿಚಯವಿದೆ. ಘಟನೆ ಕುರಿತು ನನಗೆ ಏನು ಗೊತ್ತಿಲ್ಲ. ನಾನು ಪೋಲಿಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ವಿನಂತಿಸಿದ್ದು, ಅಭಿಯೋಜನೆ ಪರ ಇರುವ ಕಾಗದ ಪತ್ರಗಳನ್ನು ಪರಿಶೀಲಿಸಿ ಪಾಟಿ ಸವಾಲಿಗೆ ಅನುಮತಿಸಲಾಯಿತು.)

ಪಾಟಿ ಸವಾಲುಃ ಎಪಿಪಿ ಯವರಿಂದ

ದಿನಾಂಕ 11.09.2015 ರಂದು ಸಾಯಂಕಾಲ 7-ಗಂಟೆಗೆ ಕರಜಗಿ ಗ್ರಾಮದ ಸಾಯಬಣ್ಣ ಮಗಿ ರವರ ಮನೆಯ ಮುಂದೆ ಚಾಸಾ-1 ಹೋಗುತ್ತಿದ್ದಾಗ ಜಮೀನಿನ ಬಾಂದ್ ವಿಚಾರವಾಗಿ ಜಗಳ ತೆಗೆದು ಚಾಸಾ-1 ಅಕ್ರಮವಾಗಿ ತಡೆದು, ಅವಾಚ್ಯ ಶಬ್ದಗಳಿಂದ ಬೈದಾಡಿ ಕೈಯಿಂದ ಮತ್ತು ಕಾಲಿನಿಂದ ಹಲ್ಲೆ ಮಾಡಿ 1 ನೇ ಆರೋಪಿ ಕೊಡಲಿಯಿಂದ ಚಾಸಾ-1 ರವರ ತಲೆಗೆ ಹಲ್ಲೆ ಮಾಡಿದಾದ ನಾನು ಮತ್ತು ಚಾಸಾ-4 ರಿಂದ 6 ರವರು ಸೇರಿ ಜಗಳ ಬಿಡಿಸಿರುತ್ತೇವೆ ಎಂದರೆ ಸರಿಯಲ್ಲ. ಘಟನೆಯಾದ ನಂತರ

ಚಾಸಾ-1 ರವರು ಪ್ರಾ.ಆ.ಕೇ. ಗೊಬ್ಬೂರ ಬಿ. ದಲ್ಲಿ ಚಿಕಿತ್ಸೆ ಪಡೆದುಕೊಂಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ.

ಈ ಕುರಿತು ಚಾಸಾ-1 ರವರು ಪ್ರಕರಣ ದಾಖಲಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಘಟನೆ ಕುರಿತು ಈಗ ಓದಿ ಹೇಳಲಾದ ನಿಪಿ-3 ರಂತೆ ಪೋಲಿಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಘಟನೆಯನ್ನು ಪ್ರತ್ಯಕ್ಷವಾಗಿ ನೋಡಿದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿರುವೆ ಎಂದರೆ ಸರಿಯಲ್ಲ.

ಪಾಟಿ ಸವಾಲುಃ ಇಲ್ಲ.

ಮರು ವಿಚಾರಣೆಃ ಇಲ್ಲ.

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೆ ಸರಿ ಇದೆ

ಪ್ರ.ದ.ನ್ಯಾ. ದಂಡಾಧಿಕಾರಿಗಳು
ಅಫಜಲಪೂರ